ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

# ಪತ್ರಿಕಾ ತುಣುಕುಗಳು
# PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ

ದಿನಾಂಕ : DATE : 10/07/2019

## ಎಂಟು ಶಾಸಕರ ರಾಜೀನಾಮೆ ಕ್ರಮಬದ್ಧವಾಗಿಲ್ಲ

ಬೆಂಗಳೂರು: ತಮ್ಮ ಕಚೇರಿಗೆ 14 ಶಾಸಕರು ರಾಜೀನಾಮೆ ಪತ್ರಗಳನ್ನು ಸಲ್ಲಿಸಿದ್ದು, ಅವುಗಳಲ್ಲಿ 5 ಕ್ರಮ ಬದ್ಧವಾಗಿದ್ದು, ಉಳಿದ 8 ಶಾಸಕರ ರಾಜೀನಾಮೆ ಪತ್ರಗಳು ಕ್ರಮಬದ್ಧವಾಗಿಲ್ಲ ಎಂದು ವಿಧಾನಸಭಾಧ್ಯಕ್ಷ ರಮೇಶ್ ಕುಮಾರ್ ಹೇಳಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 6 ನೇ ತಾರೀಖು ತಮ್ಮ ಸಮಯಾವಕಾಶ ಪಡೆಯದೇ 13 ಶಾಸಕರು ರಾಜೀನಾಮೆ ಪತ್ರಗಳನ್ನು ಸಲ್ಲಿಸಿ ಹೋಗಿದ್ದಾರೆ. ಆನಂದ್ ಸಿಂಗ್ 6ರಂದು ರಾಜೀನಾಮೆ ನೀಡಿದ್ದಾರೆ. 14 ರಾಜೀನಾಮೆ ಪತ್ರಗಳಲ್ಲಿ 5 ಕ್ರಮ ಬದ್ಧವಾಗಿವೆ ಎಂದು ಹೇಳಿದ್ದಾರೆ. ಸಿದ್ದರಾಮಯ್ಯ ಮತ್ತು ದಿನೇಶ್ ಗುಂಡೂರಾವ್ ದೂರು ಸಲ್ಲಿಸಿದ್ದಾರೆ. 12ರಂದು ತಕರಾರು ಈ ಅರ್ಜಿ ಸಲ್ಲಿಸಿದ್ದಾರೆ. ಎಲ್ಲ ಶಾಸಕರು ರಾಜ್ಯಪಾಲರನ್ನು ಭೇಟಿ ಮಾಡಿ ಖುದ್ದಾಗಿ ರಾಜೀನಾಮೆ ಸಲ್ಲಿಸಿದ್ದು, ರಾಜೀನಾಮೆ ಅಂಗೀಕರಿಸಿ ಎಂದು ರಾಜ್ಯಪಾಲರು ತಮಗೆ ಪತ್ರ ಬರೆದಿದ್ದಾರೆ. ರಾಜ್ಯಪಾಲರಿಗೆ ಪತ್ರ ಬರೆದು ಶಾಸಕರು ನೀಡಿರುವ ಪತ್ರಕ್ಕೆ ಪ್ರತಿ ಉತ್ತರ ನೀಡಿದ್ದೇನೆ ಎಂದರು. ಎಚ್. ನಾಗೇಶ್ ರಾಜೀನಾಮೆ ಪತ್ರವನ್ನು ರಾಜ್ಯಪಾಲರು ಕಳುಹಿಸಿದ್ದಾರೆ. ಅವರ ಅದನ್ನು ನಾನು ಅಂಗೀಕರಿಸಲು ಸಾಧ್ಯವಿಲ್ಲ. ಬಿಜೆಪಿ ಸೇರಲು ಪತ್ರ ಬರೆದಿದ್ದಾರೆ. ಕಾಂಗ್ರೆಸ್ ನಾಯಕರು ನೀಡಿದ್ದ ದೂರು ಮತ್ತು ಮತ್ತೊಮ್ಮೆ ದೂರು ಸಲ್ಲಿಸಿ ಪರಿಶೀಲಿಸಿ ವಿಚಾರಣೆಗೆ ಹಾಜರಾಗುವಂತೆ ಅವರಿಗೆ ನೋಟಿಸ್ ನೀಡಲಾಗುವುದು ಎಂದು ಹೇಳಿದ್ದಾರೆ.